4) ಶ್ರೀ ಎನ್.ಟಿ. ಪಾಟೀಲ, ಸಹಾಯಕ ಕಾರ್ಯಪಾಲಕ ಇಂಜಿನಿಯರ್

5) ಶ್ರೀ ಎಸ್.ಜಿ. ಮಾಳಾಪೂರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್

6) ಶ್ರೀ ಬಿ.ಎಂ. ಪಾಟೀಲ್, ಗುತ್ತಿಗೆದಾರರು ಸಾ: ಕಲಕೇರಿ

7) ಕರ್ನಾಟಕ ಭೂಸೇನಾ ನಿಗಮ ನಿಯಮಿತ

8) ಶ್ರೀ ಎಲ್. ಬಿ. ಉಪ್ಪಾರ, ಗುತ್ತಿಗೆದಾರರು ಸಾ: ಡಂಬಳ

ಉ) ಪ್ರಸ್ತುತ ಸದರಿ ಕಟ್ಟಡ ಶಿಥಿಲಾವಸ್ಥೆಯಲ್ಲಿದ್ದು, ಇದು ಕಳಪೆ ಕಾಮಗಾರಿಯ ಪರಿಣಾಮವೋ ಅಥವಾ ಸರ್ಮಕ ನಿರ್ವಹಣೆ ಮಾಡದ ಕಾರಣವೋ ಎಂಬ ಬಗ್ಗೆ ಶೀಘ್ರವಾಗಿ ನಿಷ್ಪಕ್ಷಪಾತ ತನಿಖೆ ನಡೆಸುವಂತೆ ಲೋಕಾಯುಕ್ತರನ್ನು ಕೋರಲಾಗಿದೆ.

**1961 (1743) ಶ್ರೀ ಪಾಟೀಲ್ ಎಸ್.ಎಸ್. (ಮುಂಡರಗಿ)** :– ಮಾನ್ಯ ಯುವಜನಸೇವಾ ಹಾಗೂ ಕ್ರೀಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುಂಡರಗಿ ತಾಲ್ಲೂಕಿಗೆ ಕ್ರೀಡಾಂಗಣ ಮಂಜೂರಾಗಿದೆಯೇ; ಹಾಗಿದ್ದಲ್ಲಿ, ಅದರ ಅಂದಾಜು ವೆಚ್ಚ ಎಷ್ಟು ಹಾಗೂ ಇದಕ್ಕೆ ಎಷ್ಟು ಹಣ ಬಿಡುಗಡೆ ಆಗಿದೆ;

ಆ) ಕ್ರೀಡಾಂಗಣ ಮುಗಿಸಿ ಎಂದಿನಿಂದ ಉಪಯೋಗಕ್ಕೆ ಕೊಡಲಾಗುವುದು?

**ಶ್ರೀ ಹನುಮಂತಪ್ಪ ವೈ ಆಲ್ಕೋಡ್ (ಯುವಜನಸೇವಾ ಹಾಗೂ ಕ್ರೀಡಾ ಸಚಿವರು):**

ಅ) ಹೌದು, ಅಂದಾಜು ವೆಚ್ಚ ರೂ. 40.00 ಲಕ್ಷಗಳು ಬಿಡುಗಡೆಯಾಗಿರುವ ಹಣ ರೂ. 20.00 ಲಕ್ಷಗಳು.

ಆ) ಸದ್ಯದಲ್ಲಿಯೇ ಕ್ರೀಡಾಂಗಣ ಕ್ರೀಡಾಪಟುಗಳ ಉಪಯೋಗಕ್ಕಾಗಿ ಮುಕ್ತಗೊಳಿಸಲಾಗುವುದು.

**1962 (1874) ಶ್ರೀ ಪಾಟೀಲ್ ಎಸ್. ಎಸ್. (ಮುಂಡರಗಿ)** :– ಮಾನ್ಯ ಪ್ರವಾಸೋದ್ಯಮ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸಂಚರಿಸುತ್ತಿರುವ ರೈಲುಗಳಲ್ಲಿ ಕನ್ನಡ ನಾಮಫಲಕಗಳನ್ನು ಹಾಕಲಾಗಿರುವುದೇ; ಹಾಗಿದ್ದಲ್ಲಿ, ನಾಮ ಫಲಕಗಳನ್ನು ಹಾಕಿಸಲು ಕ್ರಮ ಕೈಗೊಳ್ಳಲಾಗುವುದೇ;

ಆ) ಆಡಳಿತದಲ್ಲಿ ಕನ್ನಡವನ್ನು ಪೂರ್ಣ ಪ್ರಮಾಣದಲ್ಲಿ ಜಾರಿಗೆ ತರಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಜಾರಿಗೆ ತರಲಾಗಿದೆ;

ಇ) ಕನ್ನಡವನ್ನು ಪೂರ್ಣ ಪ್ರಮಾಣದಲ್ಲಿ ಜಾರಿಗೆ ತರಲು ಕ್ರಮಕೈಗೊಳ್ಳಲಾಗುವುದೇ;

**ಶ್ರೀ ಬಿ. ಶ್ರೀರಾಮುಲು (ಪ್ರವಾಸೋದ್ಯಮ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು)**

ಅ) ರಾಜ್ಯದಲ್ಲಿ ಸಂಚರಿಸುತ್ತಿರುವ ರೈಲುಗಳಲ್ಲಿ ಕಡ್ಡಾಯವಾಗಿ ಕನ್ನಡ ನಾಮಫಲಕಗಳನ್ನು ಹಾಕುವಂತೆ ಈಗಾಗಲೇ ರೈಲ್ವೆ ಇಲಾಖೆಗೆ ಕೋರಲಾಗಿದೆ. ಸಾಕಷ್ಟು ರೈಲುಗಳಲ್ಲಿ ಹಾಕಿರುತ್ತಾರೆ.

ಆ) ಆಡಳಿತದಲ್ಲಿ ಕನ್ನಡವನ್ನು ಪೂರ್ಣ ಪ್ರಮಾಣದಲ್ಲಿ ಜಾರಿಗೆ ತರಲಾಗುತ್ತಿದೆ. ಶೇಕಡಾ 95 ರಷ್ಟು ಪ್ರಮಾಣದಲ್ಲಿ ಜಾರಿಗೆ ತರಲಾಗಿದೆ.

ಇ) ಆಡಳಿತದಲ್ಲಿ ಕನ್ನಡವನ್ನು ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸಲು ಸರ್ಕಾರದಿಂದ ಹೊರಡಿಸಲಾದ ಆದೇಶಗಳಂತೆ ಹಲವು ಬಗೆಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

**1964 (2123) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) :–** ಮಾನ್ಯ ಯುವಜನಸೇವಾ ಹಾಗೂ ಕ್ರೀಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕು ಕ್ರೀಡಾಂಗಣದ ಕಾಮಗಾರಿಗೆ ನಿಗದಿಪಡಿಸಿರುವ ಅಂದಾಜು ಮೊತ್ತ ಎಷ್ಟು;

ಆ) ಇದುವರೆಗೆ ಆ ಕುರಿತು ಬಿಡುಗಡೆ ಮಾಡಿರುವ ಹಣದ ಮೊತ್ತ ಎಷ್ಟು;

ಇ) ಕಾಮಗಾರಿಯನ್ನು ಪೂರ್ಣ ಗೊಳಿಸಲು ಬೇಕಾಗುವ ಹಣದ ಮೊತ್ತವನ್ನು ಸರಕಾರ ಬಿಡುಗಡೆಗೊಳಿಸಿ, ದೀರ್ಘಕಾಲದಿಂದ ಅಪೂರ್ಣ ಸ್ಥಿತಿಯಲ್ಲಿರುವ ಕ್ರೀಡಾಂಗಣವನ್ನು ಪೂರ್ಣಗೊಳಿಸಲು ಸರ್ಕಾರ ತುರ್ತು ಕ್ರಮ ಕೈಗೊಳ್ಳುವುದೇ?

**ಶ್ರೀ ಹನುಮಂತಪ್ಪ ವೈ. ಅಲ್ಕೋಡ್ (ಯುವಜನಸೇವಾ ಹಾಗೂ ಕ್ರೀಡಾ ಸಚಿವರು)**

ಅ) 1994–95 ನೇ ಸಾಲಿನಲ್ಲಿ ರೂ. 23.50 ಲಕ್ಷದ ಅಂದಾಜು ವೆಚ್ಚದಲ್ಲಿ ಬೆಳ್ತಂಗಡಿ ತಾಲ್ಲೂಕು ಕ್ರೀಡಾಂಗಣವನ್ನು ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.